(iii) ವಿಧೇಯಕಗಳನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು

(ಅ) ಕರ್ನಾಟಕ ಕೃಷಿ ಉತ್ಪನ್ನ ಮಾರುಕಟ್ಟೆ (ನಿಯಂತ್ರಣ) (2ನೇ ತಿದ್ದುಪಡಿ) ವಿಧೇಯಕ, 2001 ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಆರ್.ಬಿ. ತಿಮ್ಮಾಪುರ (ಕೃಷಿ ಮಾರುಕಟ್ಟೆ ರಾಜ್ಯ ಸಚಿವರು) : ಮಾನ್ಯ ಅಧ್ಯಕ್ಷರೆ, "2001ರ ಸಾಲಿನ ಕರ್ನಾಟಕ ಕೃಷಿ ಉತ್ಪನ್ನ ಮಾರುಕಟ್ಟೆ (ನಿಯಂತ್ರಣ) (ಎರಡನೇ ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ."

ಅಧ್ಯಕ್ಷರು : ಪ್ರಸ್ತಾವ ಏನೆಂದರೆ, "2001ನೇ ಸಾಲಿನ ಕರ್ನಾಟಕ ಕೃಷಿ ಉತ್ಪನ್ನ ಮಾರುಕಟ್ಟೆ (ನಿಯಂತ್ರಣ) (ಎರಡನೇ ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

ಶ್ರೀ ಆರ್.ಬಿ. ತಿಮ್ಮಾಪುರ (ಕೃಷಿ ಮಾರುಕಟ್ಟೆ ರಾಜ್ಯ ಸಚಿವರು) : ಮಾನ್ಯ ಅಧ್ಯಕ್ಷರೆ, "2001ರ ಸಾಲಿನ ಕರ್ನಾಟಕ ಕೃಷಿ ಉತ್ಪನ್ನ ಮಾರುಕಟ್ಟೆ (ನಿಯಂತ್ರಣ) (ಎರಡನೇ ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ."

ಅಧ್ಯಕ್ಷರು : ವಿಧೇಯಕವನ್ನು ಮಂಡಿಸಲಾಗಿದೆ.

***ಅನುಬಂಧ -VII**

ಕರ್ನಾಟಕ ವಿಧಾನಸಭೆ

ಹನ್ನೊಂದನೇ ವಿಧಾನಸಭೆ

(ಮೂರನೇ ಅಧಿವೇಶನ)

ಕರ್ನಾಟಕ ಕೃಷಿ ಉತ್ಪನ್ನ ಮಾರುಕಟ್ಟೆ (ನಿಯಂತ್ರಣ)

(ಎರಡನೇ ತಿದ್ದುಪಡಿ) ವಿಧೇಯಕ 2001.

[2001ರ ವಿಧಾನಸಭೆಯ ವಿಧೇಯಕ ಸಂಖ್ಯೆ 10]

ಕರ್ನಾಟಕ ಕೃಷಿ ಉತ್ಪನ್ನ ಮಾರುಕಟ್ಟೆ (ನಿಯಂತ್ರಣ) ಅಧಿನಿಯಮ 1966ನ್ನು ಮತ್ತಷ್ಟು ತಿದ್ದುಪಡಿ ಮಾಡಲು ಒಂದು ವಿಧೇಯಕ.

ಇಲ್ಲಿ ಇನ್ನು ಮುಂದೆ ಕಂಡು ಬರುವ ಉದ್ದೇಶಗಳಿಗಾಗಿ, ಕರ್ನಾಟಕ ಕೃಷಿ ಉತ್ಪನ್ನ ಮಾರುಕಟ್ಟೆ (ನಿಯಂತ್ರಣ) ಅಧಿನಿಯಮ 1966ನ್ನು (1966ರ ಕರ್ನಾಟಕ ಅಧಿನಿಯಮ 27) ಮತ್ತಷ್ಟು ತಿದ್ದುಪಡಿ ಮಾಡುವುದು ಯುಕ್ತವಾಗಿರುವುದರಿಂದ;